**ದಿನಾಂಕ: 21.05.2022 ರಂದು ಮಧ್ಯಾಹ್ನ 3-30ಕ್ಕೆ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-178 (ಸಾರಕ್ಕಿ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-178ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ, ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| **ಅಧ್ಯಕ್ಷರು** | ನೋಡಲ್ ಅಧಿಕಾರಿ |
| **ಸದಸ್ಯ ಕಾರ್ಯದರ್ಶಿ** | ವಾರ್ಡ್ 178ರ ಸಹಾಯಕ ಅಭಿಯಂತರರು |
| **ಸದಸ್ಯರುಗಳು** | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| **ಸದಸ್ಯರುಗಳು** | ಬೆಸ್ಕಾಂ |
| **ಸದಸ್ಯರುಗಳು** | ತೋಟಗಾರಿಕಾ ಇಲಾಖೆಯ ಅಧಿಕಾರಿಗಳು |
| **ಸದಸ್ಯರುಗಳು** | ಅರಣ್ಯ ಇಲಾಖೆ ಅಧಿಕಾರಿಗಳು |
| **ಸದಸ್ಯರುಗಳು** | ಕಂದಾಯ ಪರಿವೀಕ್ಷಕರು |
| **ಸದಸ್ಯರುಗಳು** | ಬಿಡಬ್ಲ್ಯೂಎಸ್ಎಸ್‌ಬಿ ಅಧಿಕಾರಿಗಳು |
| **ಸದಸ್ಯರುಗಳು** | ಜೆ.ಪಿ.ನಗರ ಪೊಲೀಸ್ ಠಾಣಾ ಅಧಿಕಾರಿಗಳು |
| **ಸದಸ್ಯರುಗಳು** | ವಾರ್ಡ್ 178 ರ UPHC ನ ವೈದ್ಯರು |
| **ಸದಸ್ಯರುಗಳು** | ಜೆ.ಪಿ.ನಗರ 2ನೇ ಹಂತ ನಾಗರೀಕ ಕಲ್ಯಾಣ ಸಂಘದ ಸದಸ್ಯರು ಹಾಗೂ ನಾಗರೀಕರು |
| **ಸಾರ್ವಜನಿಕರು** | ಮಾರ್ಷಲ್ |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- 21ನೇ ಮುಖ್ಯರಸ್ತೆ ಹಾಗೂ ವಿ.ಇ.ಟಿ. ಸ್ಕೂಲ್ ರಸ್ತೆ ಹೊಸದಾಗಿ ಫುಟ್‌ಪಾತ್ ಅನ್ನು ಮಾಡುವುದು (ಹೆಚ್‌ಡಿಎಫ್‌ಸಿ ಬ್ಯಾಂಕ್ ರವರ ಸಹಭಾಗಿತ್ವದಲ್ಲಿ) **ಕ್ರಮ : ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಜೆ.ಪಿ.ನಗರ ಉಪವಿಭಾಗ**

- ವಿಇಟಿ ಸ್ಕೂಲ್ ಮತ್ತು ಆ ರಸ್ತೆಯ ಮನೆಗಳಿಗೆ ತೆರಳಿ ಕಸ ವಿಂಗಡಣೆ ಬಗ್ಗೆ ಅರಿವು ಮೂಡಿಸುವುದು (18 ವರ್ಷ ಮೆಲ್ಪಟ್ಟರವರಿಗೆ) ಹಾಗೂ ಆರೋಗ್ಯ ಇಲಾಖೆಯಿಂದ ಲಾರ್‌ವೆಲ್ ಸರ್ವೆ ಮಾಡುವುದು. ಕ್ರಮ :- **ಆರೋಗ್ಯ ಇಲಾಖೆ, ಜೆ.ಪಿ.ನಗರ ಉಪವಿಭಾಗ**

*ಪು.ತಿ.ನೋ.*

- ವಾರ್ಡ್ 178ರ ವ್ಯಾಪ್ತಿಯ ಪಾರ್ಕ್‌ಗಳಲ್ಲಿ ಎಲ್‌ಇಡಿ ದೀಪಗಳ ಬದಲಾಗಿ ನಾರ್ಮಲ್ ದೀಪಗಳನ್ನು ಅಳವಡಿಸುವುದು. ಕ್ರಮ : **ಬೀದಿ ದೀಪಗಳ ನಿರ್ವಹಣೆ ಬಿಬಿಎಂಪಿ (ದಕ್ಷಿಣ)**

- 21ನೇ ಮುಖ್ಯರಸ್ತೆ ಹಾಗೂ 15ನೇ ಅಡ್ಡರಸ್ತೆಗಳಲ್ಲಿನ ಪಾದಚಾರಿ ಮಾರ್ಗದ ಮೇಲೆ ವ್ಯಾಪಾರ ಮಾಡುತ್ತಿರುವವರನ್ನು ತೆರವುಗೊಳಿಸುವ ಬಗ್ಗೆ. ಕ್ರಮ : **ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಜೆ.ಪಿ.ನಗರ ಉಪವಿಭಾಗ**

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 10.30 ಕ್ಕೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು. ಹಾಗೂ ಗೈರು ಹಾಜರಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಮಾನ್ಯ ಆಯುಕ್ತರವರಿಗೆ ಸೂಚಿಸಲಾಗುವುದೆಂದು ತಿಳಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಇಂಜಿನಿಯರ್‌ರಾದ **ಶ್ರೀ ಚಂದ್ರಶೇಖರ್, ವಾರ್ಡ್** 178 ಸಾರಕ್ಕಿ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ವಾರ್ಡ್178 ರ ಸಹಾಯಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**